ಕರ್ನಾಟಕ ಸರ್ಕಾರ

# ಕರ್ನಾಟಕ ರಾಜ್ಯ ಸಹಕಾರ ಚುನಾವಣಾ ಆಯೋಗ

ಸಂಖ್ಯೆ: ಸಚುಆ/ಚುನಾವಣೆ/ 22 /2013-14

ಕರ್ನಾಟಕ ರಾಜ್ಯ ಸಹಕಾರ ವಸತಿ ಮಹಾಮಂಡಳದ ಕಟ್ಟಡ,
ನಂ.3, 2ನೇ ಮಹಡಿ, ಕರಿಯಪ್ಪ ರಸ್ತೆ,
ಬಸವನಗುಡಿ(ಕೃಷ್ಣರಾವ್ ಪಾರ್ಕ್ ಮುಂಭಾಗ)
ಬೆಂಗಳೂರು-560004 ದಿನಾಂಕ: 03.07.2013

## ಅಧಿಸೂಚನೆ

**ವಿಷಯ:-** ಸಹಕಾರ ಸಂಘಗಳ ಆಡಳಿತ ಮಂಡಳಿಗೆ ಚುನಾವಣೆ ನಡೆಸುವ ಕುರಿತು.

**ಉಲ್ಲೇಖ:-** ದಿನಾಂಕ:29-6-2013 ರಂದು ನಡೆದ ಇಲಾಖಾಧಿಕಾರಿಗಳ ಸಭೆಯಲ್ಲಿ ನಡೆದ ಚರ್ಚೆ

***

ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ 1959 (ಸಂಕ್ಷಿಪ್ತವಾಗಿ 'ಅಧಿನಿಯಮ') 39ಎ(1) ರ ಅವಕಾಶದಂತೆ ಯಾವುದೇ ಆಕಸ್ಮಿಕ ಖಾಲಿ ಸ್ಥಾನವೂ ಸೇರಿದಂತೆ ಒಂದು ಸಹಕಾರ ಸಂಘದ ಆಡಳಿತ ಮಂಡಳಿ ಸದಸ್ಯರ ಪ್ರತಿಯೊಂದು ಮಹಾಚುನಾವಣೆಯನ್ನು ಮತ್ತು ಪದಾಧಿಕಾರಿಗಳ ಚುನಾವಣೆಯನ್ನು ಅನ್ವಯವಾಗಬಹುದಾದ ಮಟ್ಟಿಗೆ, ಸಹಕಾರ ಚುನಾವಣಾ ಆಯೋಗದ ಅಧೀಕ್ಷಣೆ, ನಿರ್ದೇಶನ ಮತ್ತು ನಿಯಂತ್ರಣಕ್ಕೆ ಒಳಪಟ್ಟು ನಡೆಸತಕ್ಕದ್ದಾಗಿದೆ. ಅಧಿನಿಯಮ ಪ್ರಕರಣ 39ಎ(2)(ಎ) ರೀತ್ಯಾ ಸಹಕಾರ ಸಂಘಗಳ ಆಡಳಿತ ಮಂಡಳಿ ಸದಸ್ಯರ ಮಹಾಚುನಾವಣೆಗಳು ನಾಲ್ಕು ಹಂತಗಳಲ್ಲಿ ನಡೆಯಬೇಕಾಗಿದ್ದು, ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ ಚುನಾವಣೆಗಳು ನಡೆಯತಕ್ಕದ್ದಾಗಿದೆ. ಈ ಹಿನ್ನೆಲೆಯಲ್ಲಿ ಆಯೋಗವು ದಿನಾಂಕ:29-6-2013 ರಂದು ನಡೆದ ಇಲಾಖಾಧಿಕಾರಿಗಳ ಸಭೆಯಲ್ಲಿ ವಿಷಯದ ಬಗ್ಗೆ ಪ್ರಸ್ತಾಪಿಸಿ ಚರ್ಚೆ ನಡೆಸಿ, ಮೊದಲ ಹಂತದಲ್ಲಿ ಪ್ರಾಥಮಿಕ ಸಹಕಾರ ಸಂಘಗಳಿಗೆ ಸಂಬಂಧಪಟ್ಟಂತೆ ಚುನಾವಣೆ ನಡೆಸುವ ಬಗ್ಗೆ ದಿನಾಂಕಗಳನ್ನು ನಿಗದಿಪಡಿಸಿದ್ದು, ವಿವರಗಳು ಈ ಕೆಳಕಂಡಂತೆ ಇರುತ್ತದೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಸಹಕಾರ ಚುನಾವಣಾ ಆಯೋಗವು ಚುನಾವಣೆ ನಡೆಸುವ ಸಂಬಂಧ ಕೆಳಕಂಡಂತೆ ಚುನಾವಣಾ ದಿನಾಂಕವನ್ನು ನಿಗದಿಪಡಿಸಿ ಸದರಿ ದಿನಾಂಕದಂದು ಸಂಬಂಧಿಸಿದ ಸಂಘಗಳು ಆಡಳಿತ ಮಂಡಳಿಗೆ ಚುನಾವಣೆ ನಡೆಸತಕ್ಕದ್ದೆಂದು ಈ ಮೂಲಕ ಆದೇಶಿಸಲಾಗಿದೆ.

ಸಹಕಾರ ಚುನಾವಣಾ ಆಯೋಗ ಬೆಂಗಳೂರು

-2

| ಕ್ರಸಂ | ಪ್ರಾಥಮಿಕ ಸಹಕಾರ ಸಂಘಗಳು | ಚುನಾವಣೆ ನಡೆಸಬೇಕಾದ ದಿನಾಂಕ |
|---|---|---|
| 1 | ಹಾಲು ಉತ್ಪಾದಕರ ಸಹಕಾರ ಸಂಘಗಳು | 25-8-2013 |
| 2 | ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳು | 1-9-2013 |
| 3 | ಇತರೆ ಸಹಕಾರ ಸಂಘಗಳು (ಕೃಷಿಯೇತರ ಪತ್ತಿನ ಸಂಘಗಳು, ಅರ್ಬನ್ ಬ್ಯಾಂಕುಗಳು ಮತ್ತು ಇತರೆ ಪತ್ತಿನ ಸಂಘಗಳು | 8-9-2013 |
| 4 | ಇತರೆ ಸಹಕಾರ ಸಂಘಗಳು (ಗ್ರಾಹಕರ ಸಂಘಗಳು, ಇನ್ನಿತರೆ ಎಲ್ಲಾ ಪತ್ತೇತರ ಸಹಕಾರ ಸಂಘಗಳು/ ಇತರೆ ಸಂಘಗಳು) | 15-9-2013 |

(ಎನ್.ಸಿ. ಮುನಿಯಪ್ಪ)
ಸಹಕಾರ ಚುನಾವಣಾ ಆಯುಕ್ತರು

<u>ಇವರಿಗೆ :</u>

1. ಸಹಕಾರ ಸಂಘಗಳ ನಿಬಂಧಕರು, ನಂ.1, ಆಲಿ ಆಸ್ಕರ್ ರಸ್ತೆ, ಬೆಂಗಳೂರು-560 052.
2. ಸಹಕಾರ ಸಂಘಗಳ ಜಂಟಿ ನಿಬಂಧಕರು, ಬೆಂಗಳೂರು / ಮೈಸೂರು / ಬೆಳಗಾವಿ / ಗುಲ್ಬರ್ಗಾ ಪ್ರಾಂತ.
3. ಜಿಲ್ಲಾ ಸಹಕಾರ ಸಂಘಗಳ ಉಪನಿಬಂಧಕರು, ____________
   (ಸಂಬಂಧಿಸಿದ ಸಂಘಗಳಿಗೆ ಈ ಬಗ್ಗೆ ಸೂಕ್ತ ಸೂಚನೆ ನೀಡಲು ಕೋರಿದೆ.)
4. ಉಪವಿಭಾಗದ ಸಹಕಾರ ಸಂಘಗಳ ಸಹಾಯಕ ನಿಬಂಧಕರು ,__________
   (ಸಂಬಂಧಿಸಿದ ಸಂಘಗಳಿಗೆ ಈ ಬಗ್ಗೆ ಸೂಕ್ತ ಸೂಚನೆ ನೀಡಲು ಕೋರಿದೆ.)
5. ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಕೇಂದ್ರ ಸಹಕಾರ ಬ್ಯಾಂಕ್ ನಿ., __________
6. ವ್ಯವಸ್ಥಾಪಕ ನಿರ್ದೇಶಕರು, ಜಿಲ್ಲಾ ಹಾಲು ಉತ್ಪಾದಕರ ಸಹಕಾರ ಸಂಘಗಳ ಒಕ್ಕೂಟ ನಿ., ______________

<u>ಪ್ರತಿಯನ್ನು ಮಾಹಿತಿಗಾಗಿ:-</u>

1) ಜಿಲ್ಲಾಧಿಕಾರಿಗಳು, ______________ ಜಿಲ್ಲೆ ___________

2) ಆರಕ್ಷಕ ಅಧೀಕ್ಷಕರು, ______________ ಜಿಲ್ಲೆ ___________